ಒಂದನೇ ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹುಣಸೂರು

ಸಿ.ಸಿ. 706/2019

ಸಿ.ಡಬ್ಲ್ಯೂ-1, ಪಿ.ಡಬ್ಲ್ಯೂ-,1

ದಿ:**18.02.2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಸಾಕ್ಷಿಯ ಹೆಸರು | ಮಂಜುನಾಥ |
| ಗಂಡ/ತಂದೆಯ ಹೆಸರು | ಜವರೇಗೌಡ |
| ವಯಸ್ಸು | 42 ವರ್ಷ |
| ಕೆಲಸ | ವ್ಯವಸಾಯ |
| ವಾಸಸ್ಥಳ | ಕುಪ್ಪೆ ಗ್ರಾಮ |

**ಮುಖ್ಯ ವಿಚಾರಣೆ ಮಾನ್ಯ ಎ.ಪಿ.ಪಿ.ಯವರಿಂದ:**

ಆರೋಪಿ ಗೊತ್ತು. ಚಾಸಾ 2 ನನ್ನ ತಾಯಿ. ಚಾಸಾ3 ಮತ್ತು 4 ಗೊತ್ತು. ನಮ್ಮ ಮತ್ತು ಆರೋಪಿಯ ನಡುವೆ ಸಣ್ಣ ವಿಚಾರಕ್ಕೆ ಜಗಳವಾಗಿದ್ದು, ಈ ಬಗ್ಗೆ ನಾನು ಪೊಲೀಸರಿಗೆ ಮೌಖಿಕವಾಗಿ ತಿಳಿಸಿದ್ದೇನೆ. ಆ ಸಮಯದಲ್ಲಿ ಪೊಲೀಸರು ಈಗ ತೋರಿಸುತ್ತಿರುವ ಒಂದು ಬರವಣಿಗೆಯ ಮೇಲೆ ನನ್ನ ಸಹಿಯನ್ನು ಪಡೆದಿರುತ್ತಾರೆ. ಸಾಕ್ಷಿ ತನ್ನ ಸಹಿ ಇರುವ ಬರವಣಿಗೆಯನ್ನು ನೋಡಿ ಗುರುತಿಸಿದ್ದು, ಅದು ದೂರು ಆಗಿದ್ದು, ದೂರನ್ನು ನಿಪಿ-1 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ1(ಎ) ಎಂದು ಗುರುತಿಸಲಾಯಿತು. ನಿಪಿ-1 ರಲ್ಲಿ ಬರೆದಿರುವ ವಿಚಾರಗಳು ನನಗೆ ತಿಳಿದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಸ.ಸ.ಅ. ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಅನುಮತಿ ನೀಡಲಾಗಿದೆ.)**

**ಪಾಟೀ ಸವಾಲು ಮಾನ್ಯ ಎ.ಪಿ.ಪಿ ವಕೀಲರಿಂದಃ**

ದಿ:15.06.2018 ರಂದು ಸಂಜೆ 5.30 ಗಂಟೆ ಸಮಯದಲ್ಲಿ ನಾನು, ಚಾಸಾ2, ಚಾಸಾ4 ರವರ ಮನೆಯ ಮುಂಭಾಗದ ರಸ್ತೆಯಲ್ಲಿ ನಿಂತಿದ್ದಾಗ 1 ನೇ ಆರೋಪಿ ಬಂದು ಚಾಸಾ2 ರವರ ಜೊತೆ ಜಮೀನಿನ ವಿಚಾರದಲ್ಲಿ ಜಗಳ ಮಾಡಿದರು ಎಂದರೆ ಸರಿಯಲ್ಲ. ಆಗ ನಾನು 1 ನೇ ಆರೋಪಿಯ ಬಗ್ಗೆ ಗ್ರಾಮಸ್ಥರಿಗೆ ತಿಳಿಸಿ ತೀರ್ಮಾನ ಮಾಡಿಕೊಳ್ಳೋಣ ಎಂದು ತಿಳಿಸಿದೆ ಎಂದರೆ ಸರಿಯಲ್ಲ. ಚಾಸಾ2 ರವರನ್ನು ಆರೋಪಿ ಕೈಯಿಂದ ಹಿಡಿದುಕೊಂಡು ಎದೆಗೆ ಗುದ್ದಿ ನೋವುಂಟು ಮಾಡಿದರು ಎಂದರೆ ಸರಿಯಲ್ಲ. 2 ನೇ ಆರೋಪಿ ಸ್ಥಳಕ್ಕ ಬಂದ ಅವಾಚ್ಯ ಶಬ್ದಗಳಿಂದ ಬೈದರು ಎಂದರೆ ಸರಿಯಲ್ಲ. ನನ್ನ ಕತ್ತಿನ ಪಟ್ಟಿಯನ್ನು ಹಿಡಿದುಕೊಂಡು ಎಳೆದಾಡಿ

ನನ್ನ ಬಲಗೈ ಬೆರಳಿಗೆ ಹಂಚಿನಿಂದ ಹೊಡೆದು ರಕ್ತ ಗಾಯ ಮಾಡಿದ್ದಾರೆ ಎಂದರೆ ಸರಿಯಲ್ಲ. ಕೈಯಿಂದ ಎದೆಗೆ ಹೊಡೆದು ನೋವುಂಟು ಮಾಡಿದರು ಎಂದರೆ ಸರಿಯಲ್ಲ. ಅಲ್ಲೇ ಇದ್ದ ಚಾಸಾ3 ಮತ್ತು 4 ರವರು ಜಗಳವನ್ನು ಬಿಡಿಸಿದರು ಎಂದರೆ ಸರಿಯಲ್ಲ. ನಾನು ಮತ್ತು ಚಾಸಾ2 ರವರು ನೋವಾದ ಕಾರಣ ಹುಣಸೂರಿನ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿರುತ್ತೇವೆ ಎಂದರೆ ಸರಿಯಲ್ಲ. ಈಗ ಮೇಲೆ ಓದಿ ಹೇಳಿದ ಹಾಗೆ ದೂರನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ.

ಆರೋಪಿತರು ಹಾಗೂ ನೀವು ರಾಜಿ ಆಗಿರುತ್ತೇವೆಂದರೆ ಸರಿ. ರಾಜಿಯಾಗಿರುವ ಕಾರಣದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ ಹೇ ಕೇ ಸರಿ ಇದೆ.

ಒಂದನೇ ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ,

ಹುಣಸೂರು.

ಒಂದನೇ ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹುಣಸೂರು

ಸಿ.ಸಿ. 706/2019

ಸಿ.ಡಬ್ಲ್ಯೂ-2, ಪಿ.ಡಬ್ಲ್ಯೂ-2

ದಿ:**18.02.2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಸಾಕ್ಷಿಯ ಹೆಸರು | ಕಮಲಮ್ಮ |
| ಗಂಡ/ತಂದೆಯ ಹೆಸರು | ಜವರೇಗೌಡ |
| ವಯಸ್ಸು | 67 ವರ್ಷ |
| ಕೆಲಸ | ವ್ಯವಸಾಯ |
| ವಾಸಸ್ಥಳ | ಕುಪ್ಪೆ ಗ್ರಾಮ |

**ಮುಖ್ಯ ವಿಚಾರಣೆ ಮಾನ್ಯ ಎ.ಪಿ.ಪಿ.ಯವರಿಂದ:**

ಆರೋಪಿ ಗೊತ್ತು. ಚಾಸಾ 1 ನನ್ನ ಮಗ. ಚಾಸಾ3 ಮತ್ತು 4 ಗೊತ್ತು. ನಮ್ಮ ಮತ್ತು ಆರೋಪಿಯ ನಡುವೆ ಸಣ್ಣ ವಿಚಾರಕ್ಕೆ ಜಗಳವಾಗಿದ್ದು, ಈ ಬಗ್ಗೆ ಚಾಸಾ1 ರವರು ಪೊಲೀಸರಿಗೆ ಮೌಖಿಕವಾಗಿ ತಿಳಿಸಿದ್ದರು. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಸ.ಸ.ಅ. ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಅನುಮತಿ ನೀಡಲಾಗಿದೆ.)**

ಪಾಟೀ ಸವಾಲು ಮಾನ್ಯ ಎ.ಪಿ.ಪಿ ವಕೀಲರಿಂದಃ

ದಿ:15.06.2018 ರಂದು ಸಂಜೆ 5.30 ಗಂಟೆ ಸಮಯದಲ್ಲಿ ನಾನು, ಚಾಸಾ1, ಚಾಸಾ4 ರವರ ಮನೆಯ ಮುಂಭಾಗದ ರಸ್ತೆಯಲ್ಲಿ ನಿಂತಿದ್ದಾಗ 1 ನೇ ಆರೋಪಿ ಬಂದು ನನ್ನ ಜೊತೆ ಜಮೀನಿನ ವಿಚಾರದಲ್ಲಿ ಜಗಳ ಮಾಡಿದರು ಎಂದರೆ ಸರಿಯಲ್ಲ. ಆಗ ಚಾಸಾ 1 ರವರು 1 ನೇ ಆರೋಪಿಯ ಬಗ್ಗೆ ಗ್ರಾಮಸ್ಥರಿಗೆ ತಿಳಿಸಿ ತೀರ್ಮಾನ ಮಾಡಿಕೊಳ್ಳೋಣ ಎಂದು ತಿಳಿಸಿದ್ದರು ಎಂದರೆ ಸರಿಯಲ್ಲ. ನನ್ನನ್ನು ಆರೋಪಿ ಕೈಯಿಂದ ಹಿಡಿದುಕೊಂಡು ಎದೆಗೆ ಗುದ್ದಿ ನೋವುಂಟು ಮಾಡಿದರು ಎಂದರೆ ಸರಿಯಲ್ಲ. 2 ನೇ ಆರೋಪಿ ಸ್ಥಳಕ್ಕೆ ಬಂದು ಅವಾಚ್ಯ ಶಬ್ದಗಳಿಂದ ಬೈದರು ಎಂದರೆ ಸರಿಯಲ್ಲ. ಚಾಸಾ1 ರವರ ಕತ್ತಿನ ಪಟ್ಟಿಯನ್ನು ಹಿಡಿದುಕೊಂಡು ಎಳೆದಾಡಿ ಅವರ ಬಲಗೈ ಬೆರಳಿಗೆ ಹಂಚಿನಿಂದ ಹೊಡೆದು ರಕ್ತ ಗಾಯ ಮಾಡಿದ್ದಾರೆ ಎಂದರೆ ಸರಿಯಲ್ಲ. ಕೈಯಿಂದ ಎದೆಗೆ ಹೊಡೆದು ನೋವುಂಟು ಮಾಡಿದರು ಎಂದರೆ ಸರಿಯಲ್ಲ. ಅಲ್ಲೇ ಇದ್ದ ಚಾಸಾ3 ಮತ್ತು 4 ರವರು ಜಗಳವನ್ನು ಬಿಡಿಸಿದರು ಎಂದರೆ ಸರಿಯಲ್ಲ. ನಾನು ಮತ್ತು ಚಾಸಾ1 ರವರು ನೋವಾದ ಕಾರಣ

ಹುಣಸೂರಿನ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿರುತ್ತೇವೆ ಎಂದರೆ ಸರಿಯಲ್ಲ. ಈಗ ಮೇಲೆ ಓದಿ ಹೇಳಿದ ಹಾಗೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಹೇಳಿಕೆ ಭಾಗವನ್ನು ನಿಪಿ2 ಎಂದು ಗುರುತಿಸಲಾಯಿತು.

ಆರೋಪಿತರು ಹಾಗೂ ನೀವು ರಾಜಿ ಆಗಿರುತ್ತೇವೆಂದರೆ ಸರಿ. ರಾಜಿಯಾಗಿರುವ ಕಾರಣದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ ಹೇ ಕೇ ಸರಿ ಇದೆ.

ಒಂದನೇ ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ,
ಹುಣಸೂರು.